KATK010047762023

**<u>ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯದಲ್ಲಿ, ತುಮಕೂರು</u>**

**<u>ಸತ್ರ ಮೊಕದ್ದಮೆ.106/2023</u>**

ಪ್ರಾ.ಸಾ. : **9**

ದೋ.ಸಾ. : **15**

ದಿ.**10.06.2026**

ಹೆಸರು : ಆರ್.ಸಿ.ಜಯರಾಮಯ್ಯ

ತಂದೆಯ ಹೆಸರು : ಲೇಟ್ ಚಿಕ್ಕರಾಮಯ್ಯ

ವಯಸ್ಸು : **52** ವರ್ಷ

ಉದ್ಯೋಗ : ಮುಖ್ಯ ಪೇದೆ ನಂ.**294,** ಗುಬ್ಬಿ ಪೋಲೀಸ್ ಠಾಣೆ

ವಾಸಸ್ಥಳ : ತುಮಕೂರು

ಸಾಕ್ಷಿಯನ್ನು ಕರೆಸಿ, ಸತ್ಯಪ್ರತಿಜ್ಞೆಯ ಪ್ರಮಾಣವಚನ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆ : ಮಾನ್ಯ ಸರ್ಕಾರಿ ಅಭಿಯೋಜಕರಿಂದ :</u>**

1. ದಿ.8.05.2022 ರಿಂದ ನಾನು ಗುಬ್ಬಿ ಪೋಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.
2. ದಿ.18.07.2022 ರಂದು ನಾನು ಗುಬ್ಬಿ ಪೋಲೀಸ್ ಠಾಣೆಯಲ್ಲಿ ಎಸ್.ಹೆಚ್.ಓ. ಕರ್ತವ್ಯದಲ್ಲಿದ್ದಾಗ ಬೆಳಿಗ್ಗೆ 8.30 ಗಂಟೆಗೆ ದೂರುದಾರರಾದ ಜಯಮ್ಮ ಠಾಣೆಗೆ ಹಾಜರಾಗಿ ಟೈಪ್ ಮಾಡಿದ ದೂರನ್ನು ನೀಡಿದ್ದು, ದೂರನ್ನು ಸ್ವೀಕರಿಸಿ, ಅದನ್ನು ನಮ್ಮ ಠಾಣಾ ಮೊ.ನಂ.176/22 ರಲ್ಲಿ ಪ್ರಕರಣವನ್ನು ನೋಂದಾಯಿಸಿ, ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೂ ಅದರ ಪ್ರತಿಯನ್ನು ನನ್ನ ಮೇಲಧಿಕಾರಿಗಳಿಗೆ ರವಾನಿಸಿದೆನು. ನಿಶಾನೆ ಪಿ4 ದೂರಿನಲ್ಲಿರುವ ನನ್ನ ಸಹಿಯನ್ನು ನಿಶಾನೆ ಪಿ4(ಎ) ಎಂದು ಗುರುತಿಸಲಾಯಿತು. ಪ್ರ ವ ವರದಿಯನ್ನು ನಿಶಾನೆ ಪಿ16 ಎಂದು, ಅದರಲ್ಲಿರುವ ನನ್ನ ಸಹಿಯನ್ನು ನಿಶಾನೆ ಪಿ16(ಎ) ಎಂದು ಗುರುತಿಸಲಾಯಿತು. ಮುಂದಿನ ತನಿಖೆಯನ್ನು ಪಿಎಸ್ಐ ರವರಿಗೆ ವಹಿಸಿರುತ್ತೇನೆ.

**ಪಾಟೀ ಸವಾಲು ಶ್ರೀ.ಹೆಚ್.ಎನ್.ಗುರುನಂಜೇಗೌಡ, ವಕೀಲರಿಂದ ಆರೋಪಿತನ ಪರವಾಗಿ :**

ಆರೋಪಿತನ ಪರ ವಕೀಲರು ಹಾಜರಿಲ್ಲದಿರುವುದರಿಂದ ಪಾಟೀ ಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.

(ಉಕ್ತಲೇಖನದಂತೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಂದ ಬೆರಳಚ್ಚು ಮಾಡಲ್ಪಟ್ಟಿತು).

ಓದಿ ಹೇಳಿ ಕೇ ಸರಿ ಇದೆ ಎಂದು ಒಪ್ಪಿದ್ದಾರೆ.

ಸಹಿ/-

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ತುಮಕೂರು